# ಕರ್ನಾಟಕ ವಿಧಾನ ಪರಿಷತ್ತು

**ವಿಧಾನ ಪರಿಷತ್ತಿನ ಸದಸ್ಯರ ಹೆಸರು** : ಡಾ|| ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು)

**ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ** : 1124 (1287)

**ಉತ್ತರಿಸಬೇಕಾದ ದಿನಾಂಕ** : 13.03.2026

| ಕ್ರ.ಸಂ. | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ಗ್ರಾಮೀಣ ಪ್ರದೇಶದ ಜನರಿಗೆ ಶುದ್ಧ ಕುಡಿಯುವ ನೀರು ಒದಗಿಸುವ ಜಲಜೀವನ್ ಮಿಷನ್ ಯೋಜನೆ ಕಲ್ಯಾಣ ಕರ್ನಾಟಕ ಭಾಗದಲ್ಲಿ ಸಂಪೂರ್ಣ ವಿಫಲವಾಗಿರುವುದು ಸರ್ಕಾರದ ಗಮನಕ್ಕಿದೆಯೇ; | ಗ್ರಾಮೀಣ ಪ್ರದೇಶದ ಜನರಿಗೆ ಶುದ್ಧ ಕುಡಿಯುವ ನೀರು ಒದಗಿಸುವ ಜಲಜೀವನ್ ಮಿಷನ್ ಯೋಜನೆಯಡಿಯಲ್ಲಿ ಕಲ್ಯಾಣ ಕರ್ನಾಟಕ ಭಾಗದಲ್ಲಿ 21,53,292 ಕಾರ್ಯಾತ್ಮಕ ನಳ ಸಂಪರ್ಕಗಳನ್ನು ಸಾಧಿಸುವ ಗುರಿ ಹೊಂದಿದ್ದು, ಫೆಬ್ರುವರಿ 2026 ರವರೆಗೆ 19,22,100 ನಳ ಸಂಪರ್ಕಗಳನ್ನು ಕಲ್ಪಿಸಲಾಗಿದ್ದು, ಶೇ.89 ರಷ್ಟು ಪ್ರಗತಿ ಸಾಧಿಸಲಾಗಿದ್ದು, ಗ್ರಾಮೀಣ ಪ್ರದೇಶದ ಜನರಿಗೆ ಶುದ್ಧ ಕುಡಿಯುವ ನೀರು ಒದಗಿಸುವ ಜಲಜೀವನ್ ಮಿಷನ್ ಯೋಜನೆ ಕಲ್ಯಾಣ ಕರ್ನಾಟಕ ಭಾಗದಲ್ಲಿ ವಿಫಲವಾಗಿರುವುದಿಲ್ಲ. |
| ಆ) | ಜಲಜೀವನ್ ಮಿಷನ್ ಕಾಮಗಾರಿಗಳನ್ನು ತರಾತುರಿಯಲ್ಲಿ ಮುಗಿಸಿ, ಇಲ್ಲವೆ ಅರ್ಧದಲ್ಲಿಯೇ ನಿಲ್ಲಿಸಿ (ಅಪೂರ್ಣ ಕಾಮಗಾರಿ) ಗುತ್ತಿಗೆದಾರರು ಬಿಲ್ಲು ಎತ್ತಿರುವುದಕ್ಕೆ ತನಿಖೆ ಮಾಡಲಾಗಿದೆಯೇ; | ಜಲಜೀವನ್ ಮಿಷನ್ ಅನುಷ್ಠಾನದಲ್ಲಿ ಕಾಮಗಾರಿಗಳ ಗುಣಮಟ್ಟಕ್ಕೆ ಸಂಬಂಧಿಸಿದಂತೆ ಯೋಜನೆಯಲ್ಲಿ ಬಳಸುವ ಎಲ್ಲಾ HDPE ಪೈಪ್‌ಗಳನ್ನು M/s. Central Institute of Petrochemicals Engineering and Technology (CIPET) ಸಂಸ್ಥೆಯ ಪ್ರಯೋಗಾಲಯದಲ್ಲಿ ಅಗತ್ಯವಿರುವ ಗುಣಮಟ್ಟಗಳನ್ನು ಪರೀಕ್ಷಿಸಿ ಸಿದ್ಧಪಡಿಸಿದ ನಂತರವೇ, ಕಾಮಗಾರಿಗಳಲ್ಲಿ ಉಪಯೋಗಿಸಲಾಗಿರುತ್ತದೆ. ಪ್ರಗತಿಯಲ್ಲಿರುವ ಕಾಮಗಾರಿಗಳನ್ನು ಇಲಾಖಾ ವತಿಯಿಂದ ನೇಮಕಗೊಂಡಿರುವ 3ನೇ ವ್ಯಕ್ತಿ ತಪಾಸಣಾ ಸಂಸ್ಥೆಯವರು ಹಾಗೂ ರಾಜ್ಯ ಗುಣಮಟ್ಟ ನಿಯಂತ್ರಣ (SQM) ತಂಡದವರಿಂದ ತಪಾಸಣೆಗೆ ಒಳಪಡಿಸಲಾಗುತ್ತಿದ್ದು, ಸದರಿಯವರ ವರದಿಯನ್ವಯ ಗುತ್ತಿಗೆದಾರರಿಗೆ ಬಿಲ್ಲನ್ನು ಪಾವತಿಸಲಾಗುತ್ತಿದೆ.<br><br>ಯಾದಗಿರಿ ಜಿಲ್ಲೆಯ ವಡಗೇರಾ ತಾಲೂಕಿನ ನಾಯ್ಕಲ್ ಗ್ರಾಮದಲ್ಲಿ ಕಾಮಗಾರಿಯನ್ನು ಅರ್ಧದಲ್ಲಿಯೇ ನಿಲ್ಲಿಸಿ ಗುತ್ತಿಗೆದಾರರು ಬಿಲ್ಲು ಪಡೆದಿರುವ ಒಂದು ಪ್ರಕರಣ ದಾಖಲಾಗಿದ್ದು, ಪ್ರಸ್ತುತ ಇಲಾಖಾ ವಿಚಾರಣಾ ಹಂತದಲ್ಲಿರುತ್ತದೆ. |

| | | |
|---|---|---|
| ಇ) | ಹಳ್ಳಿಗಳಲ್ಲಿ ನಿರ್ಮಿಸಿದ ಕಾಮಗಾರಿಗಳ ಕಾರಣದಿಂದ ಸಿಮೆಂಟ್ ರಸ್ತೆಗಳನ್ನು ಮಧ್ಯದಲ್ಲಿ ಸುಮಾರು 4 ಇಂಚು/ಪ್ರತಿ 10-15 ಅಡಿ ಅಂತರದಲ್ಲಿ ಕೊರೆದು ಹಾಗೆಯೇ ಬಿಟ್ಟಿರುವುದು ಹಾಗೂ ಕೆಲವು ಕಡೆ ರಸ್ತೆ ಉದ್ದಕ್ಕೆ ಮಧ್ಯದಲ್ಲಿ 4-6 ಇಂಚು ಕೊರೆದಿರುವುದರಿಂದ ಜಾನುವಾರುಗಳು, ಜನರು ಓಡಾಡಲು ಸಾಧ್ಯವಾಗದಿರುವುದು ಸರ್ಕಾರದ ಗಮನಕ್ಕಿದೆಯೇ; | ಜಲ್ ಜೀವನ್ ಮಿಷನ್ ಯೋಜನೆಯಡಿಯಲ್ಲಿ ಕಾಮಗಾರಿಗಳನ್ನು ಅನುಮೋದಿತ ಅಂದಾಜು ಪತ್ರಿಕೆಯ ಪ್ರಕಾರ ಅನುಷ್ಠಾನಗೊಳಿಸಲಾಗುತ್ತಿದ್ದು, ಸಿ.ಸಿ. ರಸ್ತೆಗಳನ್ನು ಅಗೆದು ಪೈಪ್‌ಲೈನ್ ಅಳವಡಿಸಿ, Trial Run ಮಾಡಿದ ಕೂಡಲೇ Road Restoration ಗಳನ್ನು ಜೆ.ಜೆ.ಎಂ. ಗುತ್ತಿಗೆದಾರರ ಮೂಲಕವೇ ನಿರ್ವಹಿಸಲಾಗುತ್ತಿದ್ದು, ಜನರು ಓಡಾಡಲು ಹಾಗೂ ಜಾನುವಾರುಗಳಿಗೆ ತೊಂದರೆಯಾಗದಂತೆ, ಕ್ರಮವಹಿಸಲಾಗಿದೆ. |
| ಈ) | ನೀರಿನ ಕೊರತೆಯಿಂದ ಬಳಲುತ್ತಿರುವ ಕಲ್ಯಾಣ ಕರ್ನಾಟಕ ಪ್ರದೇಶದ ಜನರಿಗೆ ಹಳ್ಳಿಗಳಲ್ಲಿನ ಮನೆಗಳಿಗೆ ನೀರು ಸಿಗದಿರುವುದು ಹಾಗೂ ಜನರು ನೀರಿಗಾಗಿ ಪರದಾಡುತ್ತಿರುವುದು ಸರ್ಕಾರದ ಗಮನಕ್ಕಿದೆಯೇ; | ಕಲ್ಯಾಣ ಕರ್ನಾಟಕ ಪ್ರದೇಶದ ಹಳ್ಳಿಗಳಲ್ಲಿ ಬೇಸಿಗೆಯಲ್ಲಿ ನೀರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದ್ದು, ಗ್ರಾಮೀಣ ಪ್ರದೇಶಗಳಲ್ಲಿ ಮನೆಗಳಿಗೆ ಶಾಶ್ವತ ಕುಡಿಯುವ ನೀರು ಪೂರೈಕೆ ಮಾಡಲು ಈಗಾಗಲೇ ಜಲ್ ಜೀವನ್ ಮಿಷನ್ ಯೋಜನೆಯಡಿ ಏಕ ಗ್ರಾಮ ಮತ್ತು ಬಹುಗ್ರಾಮ ಕುಡಿಯುವ ನೀರಿನ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದ್ದು, ಸದರಿ ಯೋಜನೆಗಳು ಪೂರ್ಣಗೊಂಡ ನಂತರ ಗ್ರಾಮೀಣ ಜನವಸತಿಗಳಿಗೆ ಶಾಶ್ವತ ಕುಡಿಯುವ ನೀರನ್ನು ಸರಬರಾಜು ಮಾಡಲಾಗುವುದು.<br>ಮುಂಬರುವ ಬೇಸಿಗೆಗೆ ತಾತ್ಕಾಲಿಕವಾಗಿ ನೀರಿನ ತೀವ್ರ ಕೊರತೆ ಇರುವ ಜನವಸತಿಗಳಲ್ಲಿ ಮೊದಲ ಆದ್ಯತೆಯಾಗಿ ಖಾಸಗಿ ಬೋರ್‌ವೆಲ್‌ಗಳನ್ನು ಬಾಡಿಗೆ ಪಡೆಯುವ ಮೂಲಕ, ಟ್ಯಾಂಕರ್‌ಗಳ ಮೂಲಕ, ಅಗತ್ಯವಿದ್ದಲ್ಲಿ ಕೊಳವೆ ಬಾವಿಗಳನ್ನು ಫ್ಲಷಿಂಗ್ (Flushing) ಮಾಡಿ, ಆಳಗೊಳಿಸಿ (Deepening) ಹಾಗೂ Hydro fracturing ಮಾಡಲಾಗುತ್ತದೆ ಹಾಗೂ ಅನಿವಾರ್ಯ ಸಂದರ್ಭದಲ್ಲಿ ಕೊಳವೆಬಾವಿಗಳನ್ನು ಕೊರೆಯುವುದು ಅತ್ಯಗತ್ಯವೆಂದು ಕಂಡು ಬಂದಲ್ಲಿ, ಸಂಬಂಧಪಟ್ಟ ಜಿಯಾಲಜಿಸ್ಟ್ ವರದಿಯನುಸಾರ ಸೂಕ್ತ ಕ್ರಮ ಕೈಗೊಂಡು ನೀರಿನ ಸಮಸ್ಯೆಗಳನ್ನು ಬಗೆಹರಿಸಲು ಸೂಕ್ತ ಕ್ರಮ ಕೈಗೊಳ್ಳಲಾಗುತ್ತಿದೆ. |

| | | |
|---|---|---|
| ಉ) | ಯೋಜನೆಯನ್ನು ಕಟ್ಟುನಿಟ್ಟಿನಿಂದ ಜಾರಿಗೆ ತರಲು ಗುತ್ತಿಗೆದಾರರು ಕೆಲಸ ಪೂರ್ಣಗೊಳಿಸಿದ ನಂತರ ಬಿಲ್ ಪಾವತಿಸಬೇಕು. ರಸ್ತೆಗಳನ್ನು ಸರಿಯಾಗಿ ರಿಪೇರಿ ಮಾಡಬೇಕು ಹಾಗೂ ಇದಕ್ಕೆ ತಕ್ಷಣವೇ ಸೂಕ್ತ ತನಿಖೆಯಾಗಬೇಕು: ಈ ನಿಟ್ಟಿನಲ್ಲಿ ಸರ್ಕಾರವು ನ್ಯಾಯಯುತವಾಗಿ ಕ್ರಮಕೈಗೊಳ್ಳಬಹುದೆ? | ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳಲ್ಲಿ ಜೆ.ಜೆ.ಎಂ ಯೋಜನೆಯ ಅನುಷ್ಠಾನದಲ್ಲಿ ಕಾಮಗಾರಿಗಳ ಗುಣಮಟ್ಟಕ್ಕೆ ಸಂಬಂಧಿಸಿದಂತೆ ಯೋಜನೆಯಲ್ಲಿ ಬಳಸುವ ಎಲ್ಲಾ HDPE ಪೈಪ್‌ಗಳನ್ನು M/s. Central Institute of Petrochemicals Engineering and Technology (CIPET) ಸಂಸ್ಥೆಯ ಪ್ರಯೋಗಾಲಯದಲ್ಲಿ ಅಗತ್ಯವಿರುವ ಗುಣಮಟ್ಟಗಳನ್ನು ಪರೀಕ್ಷಿಸಿ ಸಿದ್ಧಪಡಿಸಿದ ನಂತರವೇ, ಕಾಮಗಾರಿಗಳಲ್ಲಿ ಉಪಯೋಗಿಸಲಾಗಿರುತ್ತದೆ. ಪ್ರಗತಿಯಲ್ಲಿರುವ ಕಾಮಗಾರಿಗಳನ್ನು ಇಲಾಖಾ ವತಿಯಿಂದ ನೇಮಕಗೊಂಡಿರುವ 3ನೇ ವ್ಯಕ್ತಿ ತಪಾಸಣಾ ಸಂಸ್ಥೆಯವರು ಹಾಗೂ ರಾಜ್ಯ ಗುಣಮಟ್ಟ ನಿಯಂತ್ರಣ (SQM) ತಂಡದವರಿಂದ ತಪಾಸಣೆಗೆ ಒಳಪಡಿಸಲಾಗುತ್ತಿದ್ದು, ಸದರಿಯವರ ವರದಿಯನ್ವಯ ಗುತ್ತಿಗೆದಾರರಿಗೆ ಬಿಲ್ಲನ್ನು ಪಾವತಿಸಲಾಗುತ್ತಿದೆ.<br>ಕಾಮಗಾರಿಗಳಲ್ಲಿ ಯಾವುದೇ ಲೋಪ ಕಂಡುಬಂದಲ್ಲಿ ಗುತ್ತಿಗೆದಾರರ ವಿರುದ್ಧ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುತ್ತಿದ್ದು, ದೋಷಪೂರಿತ ಕೆಲಸಗಳನ್ನು ಸರಿಪಡಿಸಲು ಕ್ರಮವಹಿಸಲಾಗಿದೆ. |

RDWSD/CE/TECH/149/2025-26

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಮತ್ತು ಮಾಹಿತಿ
ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು